ಕಂಪ್ಯೂಟರ್ ಕಡತ ಸಂಖ್ಯೆ:
2681/16-17

**ಕರ್ನಾಟಕ ಸರ್ಕಾರ**

ನಂ ಗ್ರಾಅಪ/09/ಗ್ರಾಪಂಅ/2016

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:16-04-2016

ಸುತ್ತೋಲೆ-4

ಜಿಲ್ಲಾ ಪಂಚಾಯತ್ ಕಾರ್ಯಾಲಯ
ಉತ್ತರ ಕನ್ನಡ ಕಾರವಾರ
MAY 2016
ದಿನಾಂಕ ವಿಷಯ
ಸಕಾ. ಮುಕಾ.

ವಿಷಯ: ಗ್ರಾಮ ಪಂಚಾಯತಿಗಳು ಸೇವಾ ಮತ್ತು ನಿರ್ವಹಣಾ ಶುಲ್ಕವನ್ನು ವಿಧಿಸಿ ವಸೂಲಿ ಮಾಡುವ ಬಗ್ಗೆ

ಉಲ್ಲೇಖ:
1. ಸರ್ಕಾರದ ಅಧಿಸೂಚನೆ ಸಂಖ್ಯೆ : ಸಂವ್ಯಶಾಇ 45 ಶಾಸನ 2015, ದಿನಾಂಕ:31-12-2015.
2. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ. 09 ಗ್ರಾಪಂಅ 2016 ದಿನಾಂಕ: 25-02-2016.
3. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ. 86 ಗ್ರಾಪಂಅ 2014; ದಿನಾಂಕ: 11-11-2014.

*****

ಸರ್ಕಾರವು ದಿನಾಂಕ : 11-11-2014 ರಲ್ಲಿ ಹೊರಡಿಸಿರುವ ಪತ್ರದಲ್ಲಿನ ಮಾರ್ಗಸೂಚಿಗಳಲ್ಲಿ ಸ್ಥಳೀಯ ಯೋಜನಾ ಪ್ರದೇಶದ ಹೊರಭಾಗದಲ್ಲಿನ ಇರುವ ಪ್ರದೇಶ ಮತ್ತು ಏಕನಿವೇಶನ ವಸತಿ / ವಸತಿಯೇತರಗಾಗಿ ಭೂ ಪರಿವರ್ತಿತ ಜಮೀನುಗಳಲ್ಲಿನ ವಿನ್ಯಾಸ ಅನುಮೋದನೆಗಾಗಿ ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿಗಳು, ಅನುಸರಿಸಬೇಕಾದ ವಿಧಾನಗಳ ಬಗ್ಗೆ ಸವಿವರವಾಗಿ ತಿಳಿಸಲಾಗಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಇಲಾಖೆಯು ನಿಗಧಿಪಡಿಸಿದ ಹಾಗೂ ಸೂಚಿತ ಮಾರ್ಗಸೂಚನೆಯನ್ವಯ ಶುಲ್ಕಗಳನ್ನು ಹಾಗೂ ಬಡಾವಣೆಗೆ ಗ್ರಾಮ ಪಂಚಾಯ್ತಿಯಿಂದಲೇ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಅರ್ಜಿದಾರರು ಒಪ್ಪಿಗೆ ನೀಡಿದ್ದಲ್ಲಿ, **ಮೂಲಭೂತ ಸೌಕರ್ಯ ಒದಗಿಸುವ ಕಾಮಗಾರಿಗಳಿಗೆ ತಗಲುವ ಅಂದಾಜು ಪಟ್ಟಿಯನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಿಂದ ಪಡೆದುಕೊಂಡು ಅಂದಾಜು ಪಟ್ಟಿಯಂತೆ ಅಭಿವೃದ್ಧಿ ಶುಲ್ಕವನ್ನು ಪಾವತಿಸುವ ಬಗ್ಗೆ ಅರ್ಜಿದಾರರಿಗೆ / ಅಭಿವೃದ್ಧಿದಾರರಿಗೆ ತಿಳುವಳಿಕೆ ನೀಡಿ ಮುಂಗಡವಾಗಿ ಪಂಚಾಯ್ತಿಗೆ ಪಾವತಿಸಿಕೊಳ್ಳಬೇಕಾಗಿರುತ್ತದೆ.** ಲೇಔಟ್ ಮಾಡುವ ಅರ್ಜಿದಾರರು ಅಂದಾಜು ವೆಚ್ಚಕ್ಕೆ ಅನುಗುಣವಾಗಿ ಪ್ರಸ್ತುತ ನಿಗದಿಪಡಿಸಿರುವ ಅಭಿವೃದ್ಧಿ ಶುಲ್ಕಕ್ಕೆ ಹೆಚ್ಚುವರಿಯಾಗಿ ಶೇ 5 ರಷ್ಟು ಸೇವಾ ಶುಲ್ಕ ಮತ್ತು ಶೇ 5 ರಷ್ಟು ನಿರ್ವಹಣಾ ಶುಲ್ಕವನ್ನು ಪಾವತಿಕೊಳ್ಳಲು ಅವಕಾಶ ಕಲ್ಪಿಸಲಾಗಿದ್ದು, ಅದರಂತೆ **ಗ್ರಾಮ ಪಂಚಾಯತಿಗಳು ಶೇ 10 ರಷ್ಟು ಸೇವಾ ಮತ್ತು ನಿರ್ವಹಣಾ ಶುಲ್ಕವನ್ನು ವಿಧಿಸಿ, ವಸೂಲಿ ಮಾಡಿಕೊಳ್ಳಬಹುದಾಗಿದೆ.**

ಗ್ರಾಮ ಪಂಚಾಯತಿಗಳು ಕಟ್ಟಡದ ಲೈಸೆನ್ಸ್ ಅಥವಾ ವಸತಿ ಅಥವಾ ವಾಸಸ್ಥಳಗಳ ಲೇಔಟ್‌ಗಳ ಅನುಮೋದನೆಗಳನ್ನು ನೀಡುವ ವಿಷಯದಲ್ಲಿ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಅಧಿನಿಯಮ, 1961 ರ ಉಪಬಂಧಗಳನ್ನು ಕಡ್ಡಾಯವಾಗಿ ಪಾಲಿಸಬೇಕಾಗುತ್ತದೆ. ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಗೆ ಬರುವ ಗ್ರಾಮ ಪಂಚಾಯತಿಗಳು ಸ್ಥಳೀಯ ಯೋಜನಾ ಪ್ರಾಧಿಕಾರಗಳಿಂದ ಲೇಔಟ್‌ಗೆ ಅನುಮೋದನೆ ಪಡೆಯಬೇಕಾಗುತ್ತದೆ. ಸ್ಥಳೀಯ ಯೋಜನಾ ಪ್ರಾಧಿಕಾರದ ಹೊರಗಡೆ ಇರುವ ಪ್ರದೇಶಕ್ಕೆ ಗ್ರಾಮ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿಯಿಂದ ಲೇಔಟ್‌ಗೆ ಅನುಮೋದನೆ ಪಡೆಯಬೇಕಾಗುತ್ತದೆ. ಯಾವುದೇ ಅನುಮೋದನೆಯು ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಅಧಿನಿಯಮ, 1961 ರ ಉಪಬಂಧಗಳ ಯಾವುದೇ ಉಲ್ಲಂಘನೆಯು ದುರ್ನಡತೆಯಾಗಿದ್ದು, ಅದಕ್ಕಾಗಿ ಸಂಬಂಧಪಟ್ಟ ಅಧಿಕಾರಿ ಅಥವಾ ಸಿಬ್ಬಂದಿಯು ಶಿಸ್ತು ಕ್ರಮಕ್ಕೆ ಹೊಣೆಗಾರರಾಗಿರಬೇಕಾಗಿರುತ್ತದೆ.

ಮೇಲ್ಕಂಡಂತೆ ವಿವರಿಸಿರುವಂತೆ ಗ್ರಾಮ ಪಂಚಾಯತಿಗಳು ಸೇವಾ ಮತ್ತು ನಿರ್ವಹಣಾ ಶುಲ್ಕವನ್ನು ವಿಧಿಸುವ ಬಗ್ಗೆ ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮ ಪಂಚಾಯತಿಗಳ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳಿಗೆ ತಿಳಿಸಿದೆ.

4/5/16

(ಕೆ. ಯಾಲಕ್ಕಿಗೌಡ)
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಸರ್ಕಾರದ ಪ್ರಧಾನ ಕಾರ್ಯದರ್ಶಿ ಕಾರ್ಯದರ್ಶಿಯವರಿಗೆ.
3) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

ಜಿಲ್ಲಾ ಪಂಚಾಯತ್ ಕಾರ್ಯಾಲಯ
ಉ. ಕ. (ಅಭಿವೃದ್ಧಿ ಶಾಖೆ)
(ಪಂ.ರಾಜ್) 31 MAY 2016
ದಿನಾಂಕ: ವಿಷಯ